ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಆರನೇ ಅಧಿವೇಶನ

(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 24ನೇ ಮಾರ್ಚ್, 2015

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನಾರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನಾರನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪಗಳು

2014-15ನೇ ಸಾಲಿನ ಪೂರಕ ಅಂದಾಜುಗಳ (ಮೂರನೆಯ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

3. ಶಾಸನ ರಚನೆ

I **ವಿಧೇಯಕವನ್ನು ಮಂಡಿಸುವುದು.**

ಕರ್ನಾಟಕ ಧನವಿನಿಯೋಗ ವಿಧೇಯಕ, 2015
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು

ಅ) 2015ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

II. **ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಕರ್ನಾಟಕ ಧನವಿನಿಯೋಗ ವಿಧೇಯಕ, 2015
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು

ಅ) 2015ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

4.ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ವಿ.ಸುನೀಲ್‌ಕುಮಾರ್ ಅವರು ಕಳೆದ ಡಿಸೆಂಬರ್ ತಿಂಗಳಿನಿಂದ ಯಾವುದೇ ಗ್ರಾಮ ಪಂಚಾಯತ್‌ಗಳಲ್ಲಿ ಕಟ್ಟಡ ನಿರ್ಮಾಣ ಪರವಾನಗಿ ನೀಡದೆ ಜನಸಾಮಾನ್ಯರಿಗೆ ಗ್ರಾಮಪಂಚಾಯತ್‌ನಿಂದ ನಿರಾಕ್ಷೇಪಣಾ ಪತ್ರ ಪಡೆಯುವಲ್ಲಿ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

2. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ವಿಜಯಪುರದ ಇಬ್ರಾಹಿಂಪುರದ ರೈಲ್ವೆ ಗೇಟ್ ಹತ್ತಿರ ಮೇಲ್ಸೇತುವೆ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

3. ಶ್ರೀ ಕೆ.ಜಿ.ಬೋಪಯ್ಯ ಅವರು ಮಡಿಕೇರಿ ನಗರದಲ್ಲಿ 2012ರಲ್ಲಿ R.A.P.D.R.P. ಯೋಜನೆಯಡಿ ವಿದ್ಯುತ್ ಸಂಪರ್ಕ ಅಭಿವೃದ್ಧಿಪಡಿಸಲು ರೂ. 4.00ಕೋಟಿ ಬಿಡುಗಡೆಯಾಗಿದ್ದರೂ ಕಾಮಗಾರಿ ಪ್ರಾರಂಭವಾಗದಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

4. ಶ್ರೀ ಜೆ.ಆರ್. ಲೋಬೋ ಅವರು ಮಂಗಳೂರು ಬಿಜೈಯಲ್ಲಿರುವ ಸೀಮಂತಿ ಬಾಯಿ ವಸ್ತು ಸಂಗ್ರಹಾಲಯ ದುಸ್ಥಿತಿಯಲ್ಲಿರುವುದರಿಂದ ಸದರಿ ವಸ್ತುಸಂಗ್ರಹಾಲಯವನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ಎನ್. ಚಲುವರಾಯಸ್ವಾಮಿ ಅವರು ನಾಗಮಂಗಲ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಶ್ರೀ ಆದಿಚುಂಚನಗಿರಿ ಮತ್ತು 128 ಗ್ರಾಮಗಳ ಹಾಗೂ ಬೋಗಾದಿ ಮತ್ತು 358 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

6. ಶ್ರೀ ಸಿ.ಟಿ. ರವಿ ಅವರು ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಲಕ್ಯಾ ಹಾಗೂ ಸಖರಾಯಪಟ್ಟಣ ಹೋಬಳಿ ವ್ಯಾಪ್ತಿಯ ಗ್ರಾಮಗಳಿಗೆ ಯಗಚಿ ನದಿಯಿಂದ ಶಾಶ್ವತ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

7. ಶ್ರೀ ಲಕ್ಷ್ಮಣ ಎಸ್. ಸವದಿ ಅವರು ಚಿಕ್ಕೋಡಿ ಜಿಲ್ಲೆಯ ಅನೇಕ ಶಾಲೆಗಳಲ್ಲಿ ಉಪನ್ಯಾಸಕರಿಲ್ಲದೆ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

8. ಶ್ರೀಮತಿ ಶಾರದಾ ಪೂರ್ಯಾ ನಾಯ್ಕ್ ಅವರು ಶಿವಮೊಗ್ಗ ತಾಲ್ಲೂಕು, ಕಸಬಾ ಹೋಬಳಿ ಸಿದ್ದಿಪುರ ಮತ್ತು ದೇವಕಾತಿ ಕೊಪ್ಪ ಗ್ರಾಮಗಳ ಬಗರ್ ಹುಕುಂ ಸಾಗುವಳಿದಾರರ ಜಮೀನನ್ನು ಕೆಐಎಡಿಬಿ ವತಿಯಿಂದ ಭೂಸ್ವಾಧೀನ ಪಡಿಸಿಕೊಂಡಿದ್ದು ಸದರಿ ಸಾಗುವಳಿದಾರರಿಗೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9. ಶ್ರೀ ಹೆಚ್.ಸಿ.ಬಾಲಕೃಷ್ಣ ಅವರು ರಾಮನಗರ ತಾಲ್ಲೂಕು, ಬಿಡದಿ ಹೋಬಳಿಯ ಬೆಂಗಳೂರು-ಮೈಸೂರು ಹೆದ್ದಾರಿಯಿಂದ ಈಗಲ್‌ಟನ್ ಮುಖಾಂತರ ಶಾನಮಂಗಲ ರಸ್ತೆ ಟೆಂಡರ್ ಕರೆದಿದ್ದು, ಹಣ ಬಿಡುಗಡೆ ಮಾಡದೆ ಕಾಮಗಾರಿ ವಿಳಂಬವಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10. ಶ್ರೀ ಎ.ಬಿ.ರಮೇಶ್ ಬಂಡಿಸಿದ್ದೇಗೌಡ ಅವರು ಮಂಡ್ಯ ಜಿಲ್ಲೆ ಕೆ.ಆರ್. ಸಾಗರ ಸುತ್ತಮುತ್ತ, ಮೈಸೂರು ಮತ್ತು ಪಾಂಡವಪುರದಲ್ಲಿ ಇತ್ತೀಚೆಗೆ ಸರಣಿ ಕೊಲೆಗಳು ನಡೆಯುತ್ತಿರುವುದರಿಂದ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೆ ಹಾಗೂ ಸಾಮಾನ್ಯ ಜನರ ಜೀವನಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

11. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ ಮತ್ತು ಸಿ.ಎನ್. ಬಾಲಕೃಷ್ಣ ಅವರುಗಳು ಹಾಸನ ಜಿಲ್ಲೆ ಹೊಳೆನರಸೀಪುರ ಕ್ಷೇತ್ರಕ್ಕೆ ಸೇರಿದ ಚನ್ನರಾಯಪಟ್ಟಣ ತಾಲ್ಲೂಕಿನ ದಂಡಿಗನಹಳ್ಳಿ ಹೋಬಳಿ, ಹಾಸನ ತಾಲ್ಲೂಕಿನ ದುದ್ದ ಮತ್ತು ಶಾಂತಿ ಗ್ರಾಮ ಹೋಬಳಿ ಹಾಗೂ ಹೊಳೆನರಸೀಪುರ ತಾಲ್ಲೂಕಿನ ಹಳೇಕೋಟೆ ಮತ್ತು ಕಸಬಾ ಹೋಬಳಿಯ ಗ್ರಾಮಗಳಲ್ಲಿ ಕುಡಿಯುವ ನೀರನ್ನು ಒದಗಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಗೋವಿಂದ ಎಂ.ಕಾರಜೋಳ ಅವರು "ಕೃಷ್ಣಾ ಮೇಲ್ದಂಡೆ ಯೋಜನೆ" ಬಗ್ಗೆ ದಿನಾಂಕ:23.03.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನೈದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 221(4102)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)